ಹರಾಸನ ಡಿಸ್ಟ್ರಿಕ್ಟು.

ಇಸ್ತಿಹಾರ್.

ತಾರೀಖು 8ನೆ ಫೆಬ್ರವರಿ 1907.

ಹೊಳೆ ನರಸೀಪುರ ತಾಲ್ಲೂಕು ದೊಡ್ಡ ಕಾಡನೂರು ಹೋಬಳಿ ಜೋಡಿ ಕುಪ್ಪೆ ಗ್ರಾಮವು ಜೋಡಿದಾರ್ರು ನಾರಾಯಣರಾವ್ ವಗೈರೇರಿಂದ ಬರತಕ್ಕ ಜೋಡಿ ಬಾಕಿಗಾಗಿ 1907ನೆ ಇಸವಿ ಮಾರ್ಚಿ ಮಾಹೆ 25ನೆ ತಾರೀಖು ಸೋಮವಾರ ದಿವಿ 11 ಘಂಟೆ ಆಗಾಯಿತು ಹೊಳೆ ನರಸೀಪುರದ ಮೊಕ್ಕಾಂನಲ್ಲಿ ಬಹಿರಂಗವಾಗಿ ಹರಾಜು ಮಾಡಿಸಲ್ಪಡುತ್ತೆಂದು ಇದರಿಂದ ಪ್ರಸಿದ್ಧಪಡಿಸಲ್ಪಟ್ಟು ಇದೆ.

ಹೆಚ್ಚು ತಪಶೀಲ್ ಬಗ್ಯೆ 1907ನೆ ಇಸವಿ ಫೆಬ್ರವರಿ 14ನೆ ಮರ್ಕುಂ ಮೈಸೂರು ಗೆಜೆಟ್ಟಿನ IIನೆ ಭಾಗದ 51-52ನೆ ಪುಟವನ್ನು ನೋಡತಕ್ಕದ್ದು.

ತಾರೀಖು 9ನೆ ಫೆಬ್ರವರಿ 1907.

ಆಲೂರು ಸಬ್ ತಾಲ್ಲೂಕು ಪಾಳ್ಯದ ಹೋಬಳಿ ಬೆಲ್ಲೂರುಪುರದ ಜೋಡಿ ಗ್ರಾಮವು ಜೋಡಿದಾರ್ರು ನರಸಿಹ್ಮಭಟ್ಟು ವಗೈರೇರಿಂದ ಬರತಕ್ಕ ಬಾಕಿಗಾಗಿ 1907ನೆ ಇಸವಿ ಏಪ್ರೆಲ್ ತಾರೀಖು 8ನೆ ಸೋಮವಾರ ದಿವಸ ದಿವಿ 11 ಘಂಟೆಗೆ ಆಲೂರು ಮೊಕ್ಕಾಂನಲ್ಲಿ ಹರಾಜು ಮಾಡಿಸುತ್ತೆಂದು ಈ ಮೂಲಕ ಪ್ರಸಿದ್ಧಪಡಿಸಲ್ಪಟ್ಟು ಇರುತ್ತೆ.

ಹೆಚ್ಚು ತಪಶೀಲ್ ಬಗ್ಯೆ 1907ನೆ ಇಸವಿ ಫೆಬ್ರವರಿ 21ನೆ ಮರ್ಕುಂ ಮೈಸೂರು ಗೆಜೆಟ್ IIನೆ ಭಾಗದ 55—56ನೆ ಪುಟಗಳನ್ನ ನೋಡತಕ್ಕದ್ದು.

ಟಿ. ಧರ್ಮರಾಜು ಚೆಟ್ಟಿ,
ಫಾರ್ ಡೆಪ್ಯೂಟಿ ಕಮಿಷನರ್.

ಕಡೂರು ಡಿಸ್ಟ್ರಿಕ್ಟು.

ಸ್ಥಿರಸ್ವತ್ತಿನ ಹರಾಜ್ ಬಗ್ಯೆ ಕೊಡಲ್ಪಟ್ಟ ಇಸ್ತಿಹಾರ್ ವ ಪ್ರಸಿದ್ಧಪತ್ರಿಕೆ.

1. ಕಂದಾಯದ ಬಾಕೀದಾರರಾದ ನೇರ್ಲೆಕೊಪ್ಪ ಮತ್ತು ಬಡಗಬೈಲ್ ಗ್ರಾಮದ Mrs. J. D. ಡಾರ್ಲಿಂಗ್‌ಬೀಬಿ ಸಾ॥ Mr. T. W. ಡಾರ್ಲಿಂಗ್ ಸಾಹೇಬರಿಂದ ಬರಬೇಕಾದ ಜಮೀರ್ ಕಂದಾಯದ ಬಾಕೀಗಾಗಿ ಇದರಡಿ ನಮೂದಾಗುವ ಸ್ಥಿರಸ್ವತ್ತು ಕಡೂರು ಡಿಸ್ಟ್ರಿಕ್ಟು ಎಡೇಹಳ್ಳಿ ಸಬ್ ತಾಲ್ಲೂಕು ಎಡೇಹಳ್ಳಿ ಕಛೇರಿ ರೂಬರೂಬ್ ಡೆಪ್ಯೂಟಿ ಅಮಲ್ದಾರ್ರಿಂದ 29—4—07ನೆ ತಾರೀಖಿನಲ್ಲಿ ಬಹಿರಂಗವಾದ ಹರಾಜು ಮಾಡಲ್ಪಡುತ್ತೆಂದು ಇದರಿಂದ ಪ್ರಸಿದ್ಧಪಡಿಸಲ್ಪಟ್ಟು ಇದೆ.

ಹರಾಜು ದಿವಿ 11 ಘಂಟೆಗೆ ಉಪಕ್ರಮಿಸಲ್ಪಡುತ್ತೆ. ಸ್ವತ್ತು ಏಕದಂ ಚಾಲದರಖಾಸ್ತುದಾರನ ಹೆಸರಿಗೆ ನಿಲ್ಲಿಸಲ್ಪಡುತ್ತೆ.

2. ಸದರೀ ಸ್ವತ್ತಿಗಾಗಿ ಹರಾಜುದಾರನು 1906ನೆ ಸಾಲಿಗೆ ಪೂರ್ತಿಯಾಗಿ ಪಾವತಿ ಮಾಡಬೇಕಾದ ಕಂದಾಯದ ಮೊಬಲಗು ಇದರಡಿ ಕಾಣಿಸಿರುವ ತಖ್ತೆಯಲ್ಲಿ ನಮೂದಿಸಿರುವ ತಪ್ಸೀಲ್ ಮೇರಿಗೆ ರೂಪಾಯ್ಗೆ 164—1-0 ಚಾಲ್ತೀವರಿಗಿನ ಬಡ್ಡಿ ದೇಖೀಲ್ ಆಗಿರುತ್ತೆ.

3. ಹರಾಜು ಕಾಲದಲ್ಲಿ ಹರಾಜ್‌ದಾರನು ಹರಾಜ್ ಮೊಬಲಗಿನ ಕೇಕಡಾ 25 ರೂಪಾಯಿಗಳನ್ನ ಡಿಪಾಜಿಟ್ಟು ಹಾಜರ್ಮಾಡಬೇಕಾಗಿರುತ್ತೆ. ಅದು ಜಾತಾ ಹರಾಜು ಬಾಬತು ಬಾಕೀ ಮೊಬಲಗು ಹರಾಜು ತಾರೀಖು ಲಾಗಾಯಿತು 15 ದಿವಸಗಳಲ್ಲಿ ಪಾವತಿ ಮಾಡಲ್ಪಡದೇ ಹೋದಲ್ಲಿ ಮೇಲೆ ಹೇಳಿದ ಡಿಪಾಜಿಟ್ಟು ಮೊಬಲಗನ್ನ ಹಾಜರ್ಮಾಡಿದವನು ಕಳದುಕೊಳ್ಳಲು ಗುರಿಯಾಗುತ್ತಾನೆ.

4. ಅಂಥಾ ಡಿಪಾಜಿಟ್ಟು ಮೊಬಲಗು ಹಾಜರ್ಮಾಡಲ್ಪಡದೆ ಯಾ ಹರಾಜು ಬಾಬತು ಬಾಕಿ ಮೊಬಲಗು ಪಾವತಿ ಮಾಡಲ್ಪಡದೇ ಹೋದಾಗ್ಯೆ ಸದರೀ ಸ್ವತ್ತು ಮೊದಲು ಹರಾಜ್‌ದಾರನ ಖರ್ಚಿನಿಂದಲೂ ಮತ್ತು ಅವನಿಗೆ ಅದರಿಂದ ಉಂಟಾಗಬಹುದಾದ ನಷ್ಟಕ್ಕೆ ಗುರಿಪಡಿಸಿಯೂ ಪುನಹ ಹರಾಜು ಮಾಡಲ್ಪಡುತ್ತೆ.

5. ಹರಾಜಿನಲ್ಲಿ ಸ್ವತ್ತು ಯಾರ ಹೆಸರಿಗಾದರೂ ನಿಲ್ಲಿಸಲ್ಪಡುವದಕ್ಕೆ ಮುಂಚಿತವಾಗಿ, ಬಾಕೀದಾರನಾಗಲೀ ಆತನ ತರಫನವನಾಗಿ ಪ್ರತಿನಿಧಿಸುವ ಯಾ ಸದರೀ ಸ್ವತ್ತಿನಲ್ಲಿ ಬಾಧ್ಯತೆ ಇರುತ್ತೆಂದು ಹೇಳುವ ಯಾವ ಇತರ ಮನುಷ್ಯನೇ ಆಗಲೀ ಬಾಕಿಯಲ್ಲಿ ಬಂದಿರುವ ಪೂರಾ ಕಂದಾಯದ ಹಣವನ್ನೂ, ಬಡ್ಡಿ ಮತ್ತು ಇತರ ಖರ್ಚುಗಳ ಸಮೇತ ಹಾಜರ್ಮಾಡುವ ಪಕ್ಷಕ್ಕೆ ಹರಾಜು ನಿಲ್ಲಿಸಲ್ಪಡುತ್ತೆ.

6. ಹರಾಜು ಡೆಪ್ಯೂಟಿ ಕಮಿಷನರವರಿಂದ ಮಂಜೂರ್ಮಾಡಲ್ಪಡುವ ತನಕ ಸ್ವತ್ತಿನ ಹರಾಜು ಪೂರ್ತಿಯಾಗುವದಿಲ್ಲ.

7. ಹರಾಜಿನಲ್ಲಿ ತಗದುಕೊಂಡವರು ಹರಾಜ್ ಮೊಬಲಗನ್ನ ಪೂರ್ತಿಯಾಗಿ ಪಾವತಿ ಮಾಡಿದ ಮೇಲೆ ಡೆಪ್ಯೂಟಿ ಕಮಿಷನರವರಿಂದ ಹರಾಜು ಮಂಜೂರ್ಮಾಡಲ್ಪಟ್ಟು ಕೂಡ್ಲೆ, ಹರಾಜುದಾರ್ರು ಸದರೀ ಸ್ವತ್ತಿನ ಸ್ವಾಧೀನವನ್ನ ಹೊಂದುವರು. ಮತ್ತು ಸದರೀ ಸ್ವತ್ತು ಹರಾಜುದಾರನ ಹೆಸರಿನಲ್ಲಿ ರಿಜಿಸ್ಟರ್ ಮಾಡಲ್ಪಟ್ಟು ಡೆಪ್ಯೂಟಿ ಕಮಿಷನರವರಿಂದ ಸೈ ಮೊಹರ್ ಮಾಡಲ್ಪಟ್ಟ ಬಂದು ಹರಾಜ್ ಸರಟಿಫಿಕೇಟ್ ಆತನಿಗೆ ಕೊಡಲ್ಪಡುವದು. ಸ್ವತ್ತಿನ ವಿವರಣೆಯಲ್ಲಿಯೂ ಯಾ ವಿಸ್ತೀರ್ಣದಲ್ಲಿಯೂ ಇರುವ ಸ್ಖಲಿತ್ಯಗಳಿಗೆ ಗವರ್ಮೆಂಟಿನವರು ಜವಾಬ್ದಾರ್ರಲ್ಲವೆಂಬ ಅಂಕವನ್ನ ಸ್ಪಷ್ಟವಾಗಿ ತಿಳಿದಿರತಕ್ಕದ್ದು.